ಬೇಲೂರಿನ ಕಂಬೈಂಡ್ ಆಸ್ಪತ್ರೆಯನ್ನು ಜನರಲ್ ಆಸ್ಪತ್ರೆಯನ್ನಾಗಿ ಪರಿವರ್ತನೆ

1174 - ಶ್ರೀ ಬಿ.ಹೆಚ್. ಲಕ್ಷ್ಮಣಯ್ಯ (ಬೇಲೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೇಲೂರಿನ ಕಂಬೈಂಡ್ ಡಿಸ್ಪೆನ್ಸರಿ ಆಸ್ಪತ್ರೆಯನ್ನು ಜನರಲ್ ಆಸ್ಪತ್ರೆಯಾಗಿ ಪರಿವರ್ತಿಸಲು 10 ವರ್ಷಗಳ ಹಿಂದೆಯೇ ಸರ್ಕಾರ ತೀರ್ಮಾನ ತೆಗೆದುಕೊಂಡಿರಲಿಲ್ಲವೇ?*

ಆ) *ಇದರ ಅಂಗವಾಗಿ ಖಾಸಗಿ ಗಣ್ಯರೊಬ್ಬರು ಜನರಲ್‌ಆಸ್ಪತ್ರೆ ಕಟ್ಟಡ ಕಟ್ಟಲು ಮುಂದೆ ಬಂದು ಕಟ್ಟಡ ಪೂರ್ಣವಾಗಿ ಕೆಲವು ವರ್ಷಗಳೇ ಕಳೆದಿದ್ದರೂ ಜನರಲ್ ಆಸ್ಪತ್ರೆಯಂದು ಪರಿವರ್ತಿಸಲು ಸಾಧ್ಯವಾಗದಿರುವುದಕ್ಕೆ ಸರ್ಕಾರಕ್ಕೆ ಇದ್ದ ಪ್ರಬಲ ಕಾರಣಗಳೇನು?*

ಇ) *ಕಳೆದ ಒಂದು ವರ್ಷದಿಂದ ಜನರಲ್ ಆಸ್ಪತ್ರೆಯಾಗಿ ಬದಲಾವಣೆ ಮಾಡಬೇಕೆಂದು ಒತ್ತಾಯಿಸುತ್ತಾ ಬಂದಿದ್ದರೂ ಸರ್ಕಾರ ಜನರಲ್ ಆಸ್ಪತ್ರೆಯೆಂದು ಪರಿವರ್ತಿಸಲು ನಿಧಾನಿಸಿರುವುದೇಕೆ?*

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಸಚಿವರು)

ಅ) 1983 ರಲ್ಲಿ ಜನರಲ್ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಯಿತು

ಆ) ಕಟ್ಟಡದ ಕೆಲಸ ಪೂರ್ತಿಯಾಗಿದೆ. ಸಿಬ್ಬಂದಿ ಮತ್ತಿತರ ಸೌಲಭ್ಯಗಳನ್ನು ಒದಗಿಸುವ ವಿಚಾರ ಪರಿಶೀಲನೆಯಲ್ಲಿದೆ.

ಇ) ಇನ್ನೂ ಪರಿಶೀಲನೆಯಲ್ಲಿದೆ.

ಹರಪನಹಳ್ಳಿ ತಾಲ್ಲೂಕನ್ನು ಬರಗಾಲದ ಪ್ರದೇಶವೆಂದು ಘೋಷಣೆ

1149 - ಶ್ರೀ ಬಿ.ಹೆಚ್. ಯಂಕಾನಾಯಕ್ (ಹರಪನಹಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹರಪನಹಳ್ಳಿ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಲು ಕ್ರಮ ಕೈಗೊಳ್ಳಲಾಗುವುದೆ?*

ಆ) *ಹಾಗಿದ್ದಲ್ಲಿ ಅಭಿವೃದ್ಧಿ ಕಾಮಗಾರಿ ಕಾರ್ಯಗಳನ್ನು ಮಾಡಲಾಗುವುದೆ?*

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಬಳ್ಳಾರಿ ಜಿಲ್ಲೆಯ ಪ್ರೌಢ ಶಾಲೆಗಳ ಸಿಬ್ಬಂದಿ ವೇತನ

1226 - ಶ್ರೀ ಬಿ.ಹೆಚ್.ಯಂಕಾನಾಯಕ್ (ಹರಪನಹಳ್ಳಿ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಳ್ಳಾರಿ ಜಿಲ್ಲೆಯ ಯೋಜನೆಯಡಿ ಬರುವ 31 ಪ್ರೌಢ ಶಾಲೆಗಳ ಸಿಬ್ಬಂದಿ ವರ್ಗದ ವೇತನ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಇದನ್ನು ಬಿಡುಗಡೆ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?*

ಇ) *ಸಂಕಷ್ಟದಲ್ಲಿರುವ ನೌಕರರ ವೇತನ ಬಿಡುಗಡೆ ಮಾಡಿ ಅವರ ಜೀವನವನ್ನು ಉತ್ತಮಗೊಳಿಸುವರೆ?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು)

ಅ) ಹೌದು